## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗೆ ಯೋಜನೇತರ ಲೆಕ್ಕಶೀರ್ಷಿಕೆ-3054-80-190-0-02-101ರಡಿ 2015-16ನೇ ಸಾಲಿಗೆ ನಾಲ್ಕನೇ ಹಾಗೂ ಅಂತಿಮ ತ್ರೈಮಾಸಿಕ ಕಂತಿನ ಸಹಾಯಾನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರ ಪತ್ರ ಸಂಖ್ಯೆ:ಕೆಆರ್‌ಆರ್‌ಡಿಎ/ಎಸಿಸಿ/01611/ಅನುದಾನ/2015-16/3180,ದಿನಾಂಕ:19-10-2015 ಮತ್ತು 20-1-2016.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:62:ಆರ್‌ಆರ್‌ಸಿ:2015, ದಿನಾಂಕ:19-5-2015.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:62/1:ಆರ್‌ಆರ್‌ಸಿ:2015, ದಿನಾಂಕ:6-8-2015.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:62/2:ಆರ್‌ಆರ್‌ಸಿ:2015, ದಿನಾಂಕ:5-11-2015
5. ಆರ್ಥಿಕ ಇಲಾಖೆಯು ಹೊರಡಿಸಿದ ಆರ್ಥಿಕ ಪ್ರತ್ಯಾಯೋಜನೆ ಆದೇಶ ಸಂಖ್ಯೆ:ಎಫ್‌ಡಿ/01/ಟಿಎಫ್‌ಪಿ/2016, ದಿನಾಂಕ:19-1-2016.

**ಪ್ರಸ್ತಾವನೆ:**

ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗೆ ಆಯವ್ಯಯದಲ್ಲಿ 2015-16ನೇ ಸಾಲಿಗೆ ರಾಜ್ಯ ವಲಯ ಕಾರ್ಯಕ್ರಮಗಳ ರಸ್ತೆ ಮತ್ತು ಸೇತುವೆಗಳು ಇದರಡಿ ಲೆಕ್ಕಶೀರ್ಷಿಕೆ-3054-80-190-0-02-101 (ಯೋಜನೇತರ) ರಡಿ ನಿಗದಿಗೊಳಿಸಿರುವ ಅನುದಾನ ರೂ.380.00ಲಕ್ಷಗಳಲ್ಲಿ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನ ರೂ.95.00ಲಕ್ಷಗಳನ್ನು ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ-1ರ ಪತ್ರ ದಿನಾಂಕ:20-1-2016ರಲ್ಲಿ ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ರವರು ಕೋರಿರುತ್ತಾರೆ.

ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗೆ ಆಡಳಿತಾತ್ಮಕ ವೆಚ್ಚಗಳಿಗೆಂದು ಆಯವ್ಯಯದಲ್ಲಿ 2015-16ನೇ ಸಾಲಿಗೆ ರಾಜ್ಯ ವಲಯದಲ್ಲಿರುವ ರಸ್ತೆ ಮತ್ತು ಸೇತುವೆಗಳು ಲೆಕ್ಕಶೀರ್ಷಿಕೆ-3054-80-190-0-02-101(ಯೋಜನೇತರ)ರಡಿ ರೂ.380.00ಲಕ್ಷಗಳನ್ನು ಒದಗಿಸಿದ್ದು, ಇದರಲ್ಲಿ ಮೊದಲ, ದ್ವಿತೀಯ ಮತ್ತು ತೃತೀಯ ತ್ರೈಮಾಸಿಕ ಕಂತಿನ ಅನುದಾನ ತಲಾ ರೂ.95.00ಲಕ್ಷಗಳಂತೆ ಒಟ್ಟು ರೂ.285.00ಲಕ್ಷಗಳನ್ನು ಮೇಲೆ ಓದಲಾದ-2, 3 & 4ರ ಆದೇಶಗಳಲ್ಲಿ ಬಿಡುಗಡೆಗೊಳಿಸಿದ್ದು, ಪ್ರಸ್ತುತ ನಾಲ್ಕನೇ ಹಾಗೂ ಅಂತಿಮ ತ್ರೈಮಾಸಿಕ ಕಂತಿನ ಅನುದಾನ ರೂ.95.00ಲಕ್ಷಗಳನ್ನು ಮೇಲೆ ಓದಲಾದ-5ರಂತೆ ಆರ್ಥಿಕ ಇಲಾಖೆಯು ಹೊರಡಿಸಿದ ಆರ್ಥಿಕ ಪ್ರತ್ಯಾಯೋಜನೆ ಆದೇಶದನ್ವಯ ಬಿಡುಗಡೆಗೊಳಿಸಲು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:62/3:ಆರ್‌ಆರ್‌ಸಿ:2015, ಬೆಂಗಳೂರು, ದಿನಾಂಕ:3-2-2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, **2015-16**ನೇ ಸಾಲಿಗೆ ರಾಜ್ಯ ವಲಯದ ಲೆಕ್ಕಶೀರ್ಷಿಕೆ-**3054-80-190-0-02-101(ಯೋಜನೇತರ)**ರಡಿ ಆಡಳಿತಾತ್ಮಕ ವೆಚ್ಚಕ್ಕಾಗಿ ಆಯವ್ಯಯದಲ್ಲಿ ನಿಗದಿಪಡಿಸಿರುವ ಅನುದಾನದಲ್ಲಿ ನಾಲ್ಕನೇ ಹಾಗೂ ಅಂತಿಮ ತ್ರೈಮಾಸಿಕ ಅನುದಾನ ರೂ.**95.00**ಲಕ್ಷಗಳನ್ನು (ರೂ. **ತೊಂಬತ್ತೈದು ಲಕ್ಷಗಳು** ಮಾತ್ರ) ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

**ಷರತ್ತುಗಳು:**

1. ಸದರಿ ಅನುದಾನವನ್ನು ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ರವರು ಗ್ರಾಂಟ್-ಇನ್-ಏಡ್ ಬಿಲ್ಲು ಸಲ್ಲಿಸಿ, ನಿರ್ದೇಶಕರು, ಗ್ರಾಮೀಣ

ಮೂಲಭೂತ ಸೌಲಭ್ಯಗಳು (ಸುವರ್ಣ ಗ್ರಾಮೋದಯ) ರವರ ಮೇಲು ರುಜು ಪಡೆದು ಖಜಾನೆಯಿಂದ ಚೆಕ್ ಪಡೆಯುವುದು.

2. ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಸಂಸ್ಥೆಯ ಅಧಿಕಾರಿ/ಸಿಬ್ಬಂದಿ ವರ್ಗದ ವೇತನ ಹಾಗೂ ವೇತನೇತರ ವೆಚ್ಚಗಳಿಗೆ ನಿಯಮಾನುಸಾರ ಭರಿಸುವುದು.
3. ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗೆ ಆಡಳಿತಾತ್ಮಕ ವೆಚ್ಚಕ್ಕೆಂದು ಬಿಡುಗಡೆಯಾದ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
4. ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಯಾವ ಉದ್ದೇಶಗಳಿಗೆ ವಿನಿಯೋಗಿಸಲಾಗಿದೆ ಎಂಬ ಬಗ್ಗೆ ವಿವರಗಳನ್ನು ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಹೊರಡಿಸಿದ ಆದೇಶ ಸಂಖ್ಯೆ:ಎಫ್‌ಡಿ/01/ಟಿಎಫ್‌ಪಿ/2016, ದಿನಾಂಕ:19-1-2016ರನ್ವಯ ಆರ್ಥಿಕ ಪ್ರತ್ಯಾಯೋಜನೆ ಪ್ರಕಾರ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಕಂಡಿಕೆ ಸಂಖ್ಯೆ:ಗ್ರಾಅಪ/50/ಪಿಬಿಎಸ್/2016, ದಿನಾಂಕ:2-2-2016ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

6/2/16

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲಕರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲಕರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲಕರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (PMU)(IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.

14. ಅಧೀನ ಕಾರ್ಯದರ್ಶಿಗಳು(ವೆಚ್ಚ-6), ಜಿ.ಪಂ, ಆರ್ಥಿಕ ಇಲಾಖೆ. ವಿಧಾನ ಸೌಧ. ಬೆಂಗಳೂರು.
15. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು,ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಬೆಂಗಳೂರು-9.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಬೆಂಗಳೂರು-9.
17. ಮಾಹಿತಿ ಕೇಂದ್ರಕ್ಕೆ.
18. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.